# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **264** |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಎನ್ ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 14.12.2021 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯದ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳ ಧೀರ್ಘಾವಧಿ ಹಣದ ಅಗತ್ಯತೆಗಳನ್ನು ಪೂರೈಸಲು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ನೆರವು ಪಡೆಯಲಾಗುತ್ತಿದೆಯೇ; ಹಾಗಿದ್ದಲ್ಲಿ, ಕಳೆದ 3 ವರ್ಷಗಳಲ್ಲಿ ಎಷ್ಟು ಕೈಗಾರಿಕೆಗಳಿಗೆ ನೆರವು ಒದಗಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು) | ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ರಾಜ್ಯದ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳ ದೀರ್ಘಾವಧಿ ಹಣದ ಅಗತ್ಯತೆಗಳನ್ನು ಪೂರೈಸಲು ನೆರವು ನೀಡಲಾಗುತ್ತಿದ್ದು, ಕಳೆದ 3 ವರ್ಷಗಳಲ್ಲಿ ಕೈಗಾರಿಕೆಗಳಿಗೆ ನೆರವು ನೀಡಿರುವ ಜಿಲ್ಲಾವಾರು ವಿವರಗಳನ್ನು **ಅನುಬಂಧ-1**ರಲ್ಲಿ ನೀಡಲಾಗಿದೆ. |
| ಆ) | ಹಣಕಾಸು ಸಂಸ್ಥೆಯ ಮೂಲಕ ಸಮಾಜದ ದುರ್ಬಲ ವರ್ಗಗಳ ಉದ್ಯಮಿಗಳಿಗೆ/ಮೊದಲ ಪೀಳಿಗೆ ಉದ್ಯಮಿಗಳಿಗೆ ಸಹಾಯ ಮಾಡಲು ಯಾವ ಯಾವ ಯೋಜನೆಗಳನ್ನು ರೂಪಿಸಿ ನೆರವು ಒದಗಿಸಲಾಗಿದೆ; (ಆದೇಶ ಸಹಿತ ಯೋಜನಾವಾರು ಸಂಪೂರ್ಣ ವಿವರ ನೀಡುವುದು) | ಸಂಸ್ಥೆಯು ಸಮಾಜದ ದುರ್ಬಲ ವರ್ಗಗಳ ಉದ್ಯಮಿಗಳಿಗೆ / ಮೊದಲ ಪೀಳಿಗೆ ಉದ್ಯಮಿಗಳಿಗೆ ರೂಪಿಸಿರುವ ಯೋಜನೆಗಳ ವಿವರ:<br><br>1. **ಪರಿಶಿಷ್ಟ ಜಾತಿ / ಪಂಗಡದ ಉದ್ದಿಮೆದಾರರಿಗೆ ಬಡ್ಡಿ ಸಹಾಯಧನ ಯೋಜನೆ:**<br>• ಪರಿಶಿಷ್ಟ ಜಾತಿ / ಪಂಗಡದ ಉದ್ದಿಮೆದಾರರು ಬಡ್ಡಿ ಸಹಾಯಧನ ಯೋಜನೆಯಡಿಯಲ್ಲಿ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಗಾತ್ರದ ಘಟಕಗಳಿಗೆ ಮತ್ತು ಸೇವಾ ಕ್ಷೇತ್ರದ ಉದ್ದಿಮೆಗಳ ಸ್ಥಾಪನೆಗೆ ಹಾಗೂ ವಾಣಿಜ್ಯ ಕಟ್ಟಡ ನಿರ್ಮಾಣಕ್ಕೆ ಶೇ.4ರ ವಾರ್ಷಿಕ ಬಡ್ಡಿ ದರದಲ್ಲಿ ಅವಧಿಸಾಲವನ್ನು ನೀಡಲಾಗುತ್ತಿದೆ. ಕೆ.ಎಸ್.ಎಫ್.ಸಿ. ವಿಧಿಸುವ ಸಾಮಾನ್ಯ ಬಡ್ಡಿ ದರದ ವ್ಯತ್ಯಾಸ ಮೊತ್ತವನ್ನು ಬಡ್ಡಿ ಸಹಾಯಧನವೆಂದು ಪರಿಗಣಿಸಿ ಕರ್ನಾಟಕ ರಾಜ್ಯ ಸರ್ಕಾರದ ಸಮಾಜ ಕಲ್ಯಾಣ ಇಲಾಖೆಯಿಂದ ಮರುಪಾವತಿಸಲಾಗುತ್ತದೆ. ಈ ಯೋಜನೆಯಡಿ ಕನಿಷ್ಠ 10.00 ಲಕ್ಷ ರೂ.ಗಳಿಂದ ಗರಿಷ್ಠ 10.00 ಕೋಟಿ ರೂ.ಗಳವರೆಗೆ ಸಾಲದ ನೆರವು ದೊರೆಯುತ್ತದೆ. ಶೇ.4ರ ವಾರ್ಷಿಕ ಬಡ್ಡಿ ದರದಲ್ಲಿ ನೀಡಲಾಗುವ ಅವಧಿ ಸಾಲದ ಮರುಪಾವತಿಯ ಅವಧಿಯು ಗರಿಷ್ಠ 8 ವರ್ಷ.<br>• ಪರಿಶಿಷ್ಟ ಜಾತಿ / ಪಂಗಡದ ಉದ್ಯಮಿಗಳಿಗಾಗಿ ಅತಿ ಸಣ್ಣ ಮತ್ತು ಸಣ್ಣ ಪ್ರಮಾಣದ ಯೋಜನಾ ವೆಚ್ಚ ರೂ.2.00 ಕೋಟಿ ಮೀರದ ಕೈಗಾರಿಕೆಗಳನ್ನು ಹೊಸದಾಗಿ ಸ್ಥಾಪಿಸುವವರಿಗೆ ಪೂರಕ ಭದ್ರತೆ ಖಾತರಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ. |